# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** 1) ಶ್ರೀ ಸಿ ಆರ್ ಉಮೇಶ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು 2) ಶ್ರೀ ರಾಮಚಂದ್ರಪ್ಪ ಜಿ, ಕಾರ್ಯದರ್ಶಿ, ಕೊಡ್ಲಾಪುರ ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು ಇವರ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ.

**ಓದಲಾಗಿದೆ:** 1. ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ:ಕಂಪ್ಲೇಂಟ್/ಉಪಲೋಕ್/ಬಿಡಿ/1593/2015/ಎಆರ್‌ಎಲ್‌ಓ-2, ದಿನಾಂಕ: 26-05-2017.

2. ಮಾನ್ಯ ಉಪಲೋಕಾಯಕ್ತರವರ ವರದಿ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ ಬಿಡಿ/1593/2015/ಸನಿಕಾಸ-2, ದಿನಾಂಕ: 06-05-2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ನಿಬಂಧಕರು ಕರ್ನಾಟಕ ಲೋಕಾಯುಕ್ತ ಇವರ ಪತ್ರದ ಸಂಗಡ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3) ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ: 06-05-2017ರ ವರದಿಯಲ್ಲಿ 1) ಶ್ರೀಮತಿ ರಮಾದೇವಿ, ಅಧ್ಯಕ್ಷರು, ಕೊಡ್ಲಾಪುರ ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು 2) ಶ್ರೀ ಸಿ.ಆರ್.ಉಮೇಶ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು 3) ಶ್ರೀ ರಾಮಚಂದ್ರಪ್ಪ ಜಿ, ಕಾರ್ಯದರ್ಶಿ, ಕೊಡ್ಲಾಪುರ ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು (ಇನ್ನು ಮುಂದೆ 1 ರಿಂದ 3ನೇ ಎದುರುದಾಖರು ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

**ದೂರಿನ ಸಂಕ್ಷಿಪ್ತ ವಿವರಣೆ:**

ದೂರುದಾರರು ತಮ್ಮ ದೂರಿನಲ್ಲಿ ತಾಲ್ಲೂಕು ಕೊಡ್ಲಾಪುರ ಗ್ರಾಮಪಂಚಾಯತಿಯಲ್ಲಿ 2012-13ನೇ ಸಾಲಿನ ರಾಜೀವ್ ಗಾಂಧೀ ವಸತಿ ನಿವೇಶನ ಹಂಚಿಕೆಯಾಗಿದ್ದು, ಆದರೆ ಗ್ರಾಮಸಭೆಯಲ್ಲಿ ಆಯ್ಕೆಯಾದ ಫಲಾನುಭವಿಗಳನ್ನು ಬದಲಿಸಿ, ತಿದ್ದಿ, ಕೈಬರವಣಿಗೆಯಲ್ಲಿ ಬರೆದು ಬೇರೆ ಫಲಾನುಭವಿಗಳನ್ನು ಆಯ್ಕೆ ಮಾಡಿರುತ್ತಾರೆ. ಆದ್ದರಿಂದ ಈ ಬಗ್ಗೆ ತನಿಖೆ ಮಾಡಿ ಎದುರುದಾರರ ವಿರುದ್ಧ ಕ್ರಮಕೈಗೊಳ್ಳಬೇಕೆಂದು ಕೋರಿ ದೂರು ಸಲ್ಲಿಸಿದ್ದಾರೆ.

2 ಮತ್ತು 3ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ಮಾನ್ಯ ಶಾಸಕರು ಅಧ್ಯಕ್ಷರಾಗಿರುವ ವಸತಿ ರಹಿತರ ಜಾಗೃತಿ ಸಮಿತಿಗೆ ಫಲಾನುಭವಿಗಳ ಪಟ್ಟಿಯನ್ನು ಸಲ್ಲಿಸಲಾಗಿತ್ತು. ಈ ಸಭೆಯಲ್ಲಿ ಗ್ರಾಮಪಂಚಾಯತಿ ಅಧ್ಯಕ್ಷರಾದ 1ನೇ ಎದುರುದಾರರು ಭಾಗವಹಿಸಿದ್ದು, ಆ ಸಂದರ್ಭದಲ್ಲಿ ಮೂಲ ಆಯ್ಕೆ ಪಟ್ಟಿಯಲ್ಲಿರುವ 6 ಜನ ಫಲಾನುಭವಿಗಳ ಬದಲಿಗೆ ಹೊಸದಾಗಿ 6 ಫಲಾನುಭವಿಗಳನ್ನು ಸೇರ್ಪಡೆ ಮಾಡುವಂತೆ ಮೌಖಿಕವಾಗಿ ತಿಳಿಸಿರುತ್ತಾರೆ. ಆದರೆ ಇದರಲ್ಲಿ ತಾವು ಯಾವುದೇ ಅಕ್ರಮ ಮಾಡಿರುವುದಿಲ್ಲ. ಆದ್ದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ. ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ದೂರಿನ ಅಂಶಗಳನ್ನು ಮನರುಚ್ಚರಿಸಿದ್ದಾರೆ.

ದೂರುದಾರರು ಹಾಜರುಪಡಿಸಿದ ದೂರು ಮತ್ತು ದಾಖಲಾತಿಗಳು, ಆಕ್ಷೇಪಣೆ, ಪ್ರತ್ಯುತ್ತರ ಮತ್ತು ದಾಖಲಾತಿಗಳನ್ನು ಪರಿಶೀಲಿಸಿದಾಗ, ದೂರುದಾರರು ತಮ್ಮ ದೂರಿನೊಂದಿಗೆ ಗ್ರಾಮಸಭೆಯಲ್ಲಿ ಆಯ್ಕೆ ಮಾಡಿದ ಮೂಲ ಫಲಾನುಭವಿಗಳ ಪಟ್ಟಿ ಹಾಗೂ ಅಕ್ರಮ ಫಲಾನುಭವಿಗಳ ಪಟ್ಟಿಯನ್ನು ಸಲ್ಲಿಸಿದ್ದು ಅದು ಈ ಕೆಳಗಿನಂತಿರುತ್ತದೆ.

| ಕ್ರಮ ಸಂಖ್ಯೆ | ನಿವೇಶನ ನಂ | ಮೂಲ ಫಲಾನುಭವಿಯ ಹೆಸರು | ತಿದ್ದುಪಡಿಮಾಡಲಾದ ಫಲಾನುಭವಿಯ ಹೆಸರು |
|---|---|---|---|
| 12 | 12 | ರಂಗಮ್ಮ ಕೋಂ ಮೂಡ್ಲಪ್ಪ | ಭೂತಮ್ಮ ಕೋಂ ಮೂಡ್ಲಪ್ಪ |
| 04 | 33 | ತಿಪ್ಪಮ್ಮ ಕೋಂ ವೆಂಕಟಪ್ಪ | ಗಂಗರತ್ನಮ್ಮ ಕೋಂ ಗಂಟಪ್ಪ |
| 10 | 12 | ಉಮಾದೇವಿ ಕೋಂ ಬಾಲರಾಜು | ವೆಂಕಟಲಕ್ಷ್ಮಮ್ಮ ಕೋಂ ನಾಗರಾಜಪ್ಪ |
| 13 | 15 | ಲಕ್ಷ್ಮಮ್ಮ ಕೋಂ ಲಿಂಗಣ್ಣ | ಪುಟ್ಟಲಿಂಗಮ್ಮ ಕೋಂ ಲಿಂಗಣ್ಣ |

| | | | |
|---|---|---|---|
| 17 | 19 | ಗೌರಮ್ಮ ಕೋಂ ಅಶ್ವತ್ಥಪ್ಪ | ಭೂಮಿಕಾ ಕೋಂ ರಾಧಾಕೃಷ್ಣ |
| 30 | 30 | ಸಕ್ಕರಮ್ಮ ಕೋಂ ನಾರಾಯಣಪ್ಪ | ಅಲವೇಲಮ್ಮ ಕೋಂ ರಾಮಾಂಜನಪ್ಪ |

ಕೊಡ್ಲಾಪುರ ಗ್ರಾಮಪಂಚಾಯತಿಯ ಕಾರ್ಯದರ್ಶಿ, ಅಭಿವೃದ್ಧಿ ಅಧಿಕಾರಿ, ಅಧ್ಯಕ್ಷರು ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳೂ, ತಾಲ್ಲೂಕು ಪಂಚಾಯತ್, ಮಧುಗಿರಿ ಇವರ ಸಹಿಯುಳ್ಳ ಫಲಾನುಭವಿಗಳ ಪಟ್ಟಿಯು ಲಭ್ಯವಿದ್ದು, ಇದರಲ್ಲಿ ಮೇಲೆ ತಿಳಿಸಿರುವ ಮೂಲ ಪಟ್ಟಿಯ ಫಲಾನುಭವಿಗಳನ್ನು ತೆಗೆದುಹಾಕಿ ಅಕ್ರಮ ಪಟ್ಟಿಯಲ್ಲಿ ಇರುವ ಫಲಾನುಭವಿಗಳ ಹೆಸರನ್ನು ಕೈ ಬರವಣಿಗೆ ಮೂಲಕ ನಮೂದಿಸಿರುತ್ತಾರೆ. ಇದರಿಂದ ಕಂಡುಬರುವುದೇನೆಂದರೆ ಗ್ರಾಮಸಭೆಯಲ್ಲಿ ಆಯ್ಕೆಯಾದ ಮೂಲ ಫಲಾನುಭವಿಗಳ ಪೈಕಿ 6 ಜನರ ಬದಲಿಗೆ ಬೇರೆ 6 ಜನರನ್ನು ಆಯ್ಕೆ ಮಾಡಿರುವುದು ಕಂಡುಬರುತ್ತದೆ. ಎದುರುದಾರರ ಪ್ರಕಾರ ಈ ಅಕ್ರಮವನ್ನು 1ನೇ ಎದುರುದಾರರು ತಮ್ಮ ಮೌಖಿಕ ಆದೇಶದ ಮೇರೆಗೆ ತಿದ್ದುಪಡಿ ಮಾಡಿರುತ್ತಾರೆಂದು ತಿಳಿಸಿರುತ್ತಾರೆ.

ಫಲಾನುಭವಿಗಳ ಪಟ್ಟಿಯನ್ನು ಗಮನಿಸಿದಾಗ ಇದಕ್ಕೆ ಎದುರುದಾರರೆಲ್ಲರ ಸಹಿಯೂ ಇದ್ದು, ಇದನ್ನು 1ನೇ ಎದುರುದಾರರೊಬ್ಬರೇ ಮಾಡಿದ್ದಾರೆಂದು ಹೇಳಲಾಗುವುದಿಲ್ಲ. ಆಶ್ರಯ ಯೋಜನೆಯಲ್ಲಿ ನಿಯಮದ ಪ್ರಕಾರ ಫಲಾನುಭವಿಗಳನ್ನು ಗ್ರಾಮಸಭೆಯಲ್ಲಿ ಆಯ್ಕೆ ಮಾಡಿ ಅದನ್ನೇ ಅಂತಿಮಗೊಳಿಸಬೇಕಾಗುತ್ತದೆ. ಆದರೆ ಈ ಪ್ರಕರಣದಲ್ಲಿ ಗ್ರಾಮಸಭೆಯಲ್ಲಿ ಆಯ್ಕೆಮಾಡಿದ ಪಟ್ಟಿಯನ್ನು ಅಂತಿಮಗೊಳಿಸದೆ, ಅದನ್ನು ತಿದ್ದುಪಡಿ ಮಾಡಿ ಕೆಲವು ವ್ಯಕ್ತಿಗಳ ಹೆಸರನ್ನು ಸೇರಿಸಿರುವುದರಿಂದ ಇದು ಅಕ್ರಮವೆನಿಸುತ್ತದೆ. ಆದ್ದರಿಂದಲೇ ಈ ಫಲಾನುಭವಿಗಳ ಪಟ್ಟಿಗೆ ದೂರು ಬಂದಿದ್ದು ಇರುತ್ತದೆ.

2 ಮತ್ತು 3ನೇ ಎದುರುದಾರರು ತಾವು ಈ ಅಕ್ರಮಪಟ್ಟಿ ತಯಾರಿಸಲು ಕಾರಣಕರ್ತರಾಗಿರುವುದಿಲ್ಲವೆಂದು ತಿಳಿಸಿದ್ದು, ಆದರೆ, ಈ ಪಟ್ಟಿಗೆ ಎದುರುದಾರರೆಲ್ಲರ ಸಹಿ ಇರುವುದು ಕಂಡುಬರುತ್ತದೆ. ಆದ್ದರಿಂದ 2 ಮತ್ತು 3ನೇ ಎದುರುದಾಖರು ಕರ್ತವ್ಯಲೋಪವೆಸಗಿದ್ದಾರೆಂದು ಮೇಲ್ನೋಟಕ್ಕೆ ಕಂಡುಬರುತ್ತದೆ.

ಆದುದರಿಂದ, 1) ಶ್ರೀ ಸಿ ಆರ್ ಉಮೇಶ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು 2) ಶ್ರೀ ರಾಮಚಂದ್ರಪ್ಪ ಜಿ, ಕಾರ್ಯದರ್ಶಿ, ಕೊಡ್ಲಾಪುರ ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು ಸದರಿ ಎದುರುದಾರರುಗಳು ಸರ್ಕಾರಿ ನೌಕರರಾಗಿದ್ದು, ಸದರಿ ಎದುರುದಾರರುಗಳ ವಿರುದ್ಧ ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಾವಳಿ 1966ರ ನಿಯಮ 3(1) (i) ಮತ್ತು (ii) ರನ್ವಯ ದುರ್ನಡತೆ/ದುರ್ವತನೆ ಕಂಡು ಬಂದಿರುವುದರಿಂದ, ಸದರಿ ಎದುರುದಾರರ ವಿರುದ್ಧ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲು, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3)ರ ಅಡಿ ಪ್ರದತ್ತವಾದ ಅಧಿಕಾರದಡಿ 2 ಮತ್ತು 3ನೇ ಎದುರುದಾರರುಗಳ ವಿರುದ್ಧ ಇಲಾಖಾ ವಿಚಾರಣೆ ಮಾಡಲು ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 14–ಎ ರಡಿಯಲ್ಲಿ ಈ ಸಂಸ್ಥೆಗೆ ವಹಿಸಬೇಕೆಂದು ಕೋರಿದೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/500/ಗ್ರಾಪಂಕಾ/2017 ಬೆಂಗಳೂರು, ದಿನಾಂಕ: 15-06-2017.</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ 1) ಶ್ರೀ ಸಿ ಆರ್ ಉಮೇಶ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು 2) ಶ್ರೀ ರಾಮಚಂದ್ರಪ್ಪ ಜಿ, ಕಾರ್ಯದರ್ಶಿ, ಕೊಡ್ಲಾಪುರ ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ ಸಂಖ್ಯೆ 1 ರಿಂದ 32 ರವರೆಗಿನ ಮೂಲದಾಖಲೆಗಳನ್ನು ಈ ಪತ್ರದೊಂದಿಗೆ ಹಿಂದಿರುಗಿಸಲಾಗಿದೆ)
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ.
6. ಶ್ರೀ ಸಿ ಆರ್ ಉಮೇಶ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕೊಡ್ಲಾಪುರ ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ.
7. ಶ್ರೀ ರಾಮಚಂದ್ರಪ್ಪ ಜಿ, ಕಾರ್ಯದರ್ಶಿ, ಕೊಡ್ಲಾಪುರ ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
9. ಗಣಕ ಕೋಶ.